# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ 5202/E/23-24

ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 9.1.24

**ಕಛೇರಿ ಆದೇಶ**

ವಿಷಯ: ಶ್ರೀ ಬಸವರಾಜು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಇವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆ ಸಂಖ್ಯೆ: ನಅಇ 23 ಎಂ.ಎನ್.ಯು 2022 (ಭಾಗ-5), ಬೆಂಗಳೂರು ದಿನಾಂಕ: 14-06-2023

2) ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆ ಸಂಖ್ಯೆ: ನಅಇ 203 ಎಂ.ಎನ್.ಯು 2023 ದಿನಾಂಕ: 21-12-2023

----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಶ್ರೀ ಬಸವರಾಜು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಕರ್ನಾಟಕ ವಿದ್ಯುತ್ ನಿಗಮ ನಿಮಿತ ಸಂಸ್ಥೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಇವರನ್ನು ಉಲ್ಲೇಖ-(2)ರ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆಯಲ್ಲಿ ಮಾತೃ ಇಲಾಖೆಯಾದ ಕರ್ನಾಟಕ ವಿದ್ಯುತ್ ನಿಗಮ ನಿಯಮಿತ ಸಂಸ್ಥೆಗೆ ಹಿಂದಿರುಗಿಸಿ ಆದೇಶಿಸಿದ್ದು, ಪ್ರಸ್ತುತ ಸದರಿ ಅಭಿಯಂತರರು ಉಲ್ಲೇಖ-(1)ರ ಆದೇಶದಂತೆ ಅಮಾನತ್ತಿನಲ್ಲಿರುವುದರಿಂದ, ಸದರಿಯವರನ್ನು ಈ ತಕ್ಷಣದಿಂದ ಜಾರಿಗೆಬರುವಂತೆ ಈ ಕೆಳಕಂಡ ಷರತ್ತಿಗೊಳಪಡಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಿ ಆದೇಶಿಸಿದೆ.

**ಷರತ್ತುಗಳು:-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್, ಹೆಲ್ಮೆಕಾರ್ಡ್, ಗುರುತಿನ ಚೀಟಿ (Identity card) ಹಾಗೂ ಲ್ಯಾಪ್‌ಟಾಪ್ ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

SDA 17/01/2024

9/1
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

8/1/2024 8/1/24

**ಪ್ರತಿಯನ್ನು :**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ.
: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ಬೆಂಗಳೂರು ರವರಿಗೆ ಕಳುಹಿಸಿದೆ.
: ವಲಯ ಆಯುಕ್ತರು (ರಾಜರಾಜೇಶ್ವರಿನಗರ) ವಲಯ ರವರಿಗೆ ಕಳುಹಿಸಿದೆ.
: ಜಂಟಿ ಆಯುಕ್ತರು (ರಾಜರಾಜೇಶ್ವರಿನಗರ) / ಮುಖ್ಯ ಅಭಿಯಂತರರು (ರಾಜರಾಜೇಶ್ವರಿನಗರ) ವಲಯ ರವರಿಗೆ ಕಳುಹಿಸಿದೆ.
: ಉಪ ಮುಖ್ಯ ಮಾಹಿತಿ ಅಧಿಕಾರಿ ರವರಿಗೆ ಕಳುಹಿಸುತ್ತಾ, ಸದರಿಯವರು ಮೊಬೈಲ್ ಫೋನ್, ಮತ್ತು ಸಿಮ್‌ಕಾರ್ಡ್ ಅನ್ನು ಪಾಲಿಕೆಗೆ ಹಿಂದಿರುಗಿಸಿರುವ ಬಗ್ಗೆ ದೃಢೀಕರಿಸಿಕೊಳ್ಳುವುದು.
: ಕಾರ್ಯಪಾಲಕ ಅಭಿಯಂತರರು (ರಾಜರಾಜೇಶ್ವರಿನಗರ) / ಸ.ಕಾ.ನಿ.ಅ (ರಾಜರಾಜೇಶ್ವರಿನಗರ) ಉಪ ವಿಭಾಗ ರವರಿಗೆ ಕಳುಹಿಸಿದೆ.
: ಮು.ಲೆ.ಅ / ಮು.ಲೆ.ಪ ರವರಿಗೆ ರವರಿಗೆ /ಉ.ನಿ (ಹಣಕಾಸು-ರಾಜರಾಜೇಶ್ವರಿನಗರ) ರವರಿಗೆ ಕಳುಹಿಸಿದೆ.
: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.

ಉಪ ಮುಖ್ಯ ಮಾಹಿತಿ ಅಧಿಕಾರಿ
(ಮಾಹಿತಿ ತಂತ್ರಜ್ಞಾನ) ರವರ ಕಛೇರಿ
ಸಂಖ್ಯೆ: 1205
ದಿನಾಂಕ: 17/01/2024
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ